# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 722

ಸದಸ್ಯರ ಹೆಸರು : ಶ್ರೀ ಆರ್.ಧರ್ಮಸೇನ

ಉತ್ತರಿಸಬೇಕಾದ ದಿನಾಂಕ : 17-09-2021

ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ಸಿ&ಆರ್ ಕರಡನ್ನು ಪ್ರಕಟಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |
| ಆ) | ಅದರಲ್ಲಿನ ಕ್ರಮ ಸಂಖ್ಯೆ 21 ರಲ್ಲಿ ಕಂಪ್ಯೂಟರ್ ಪ್ರೋಗ್ರಾಮರ್‌ನೊಂದಿಗೆ ಪ್ರೋಗ್ರಾಮರ್ ಎಕ್ಸಿಕ್ಯೂಟಿವ್/ ಎಕ್ಸಿಕ್ಯೂಟಿವ್ ಅಸಿಸ್ಟೆಂಟ್ ಅನ್ನು ಒಂದುಗೂಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |
| ಇ) | ಬಂದಿದ್ದಲ್ಲಿ, ಅವುಗಳ ವೇತನ ಶ್ರೇಣಿಯಲ್ಲಿ ಹಾಗೂ ಅರ್ಹತಾ ಪರೀಕ್ಷೆಯಲ್ಲಿ ವ್ಯತ್ಯಾಸ ಕಂಡುಬಂದಿದ್ದರೂ ಎಲ್ಲವನ್ನು ಒಂದುಗೂಡಿಸಿದ್ದು, ಪ್ರಥಮ ದರ್ಜೆ ಸಹಾಯಕರನ್ನು ಒಳಪಡಿಸದಿರಲು ಕಾರಣವೇನು; | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವೃಂದ ಮತ್ತು ನೇಮಕಾತಿ ನಿಯಮಗಳು 2011 ನ್ನು ಪರಿಷ್ಕರಿಸುವ ಸಂಬಂಧ ಕರಡು ವೃಂದ ಮತ್ತು ನೇಮಕಾತಿ ನಿಯಮಗಳನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಿ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ. ಕರಡು ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಆಕ್ಷೇಪಣೆಗಳು ಸ್ವೀಕೃತವಾಗಿದ್ದು, ಪರಿಶೀಲಿಸಿ ಕ್ರಮವಹಿಸಲಾಗುವುದು. |
| ಈ) | ಎಕ್ಸಿಕ್ಯೂಟಿವ್ ಅಸಿಸ್ಟೆಂಟ್ ಮತ್ತು ಪ್ರಥಮ ದರ್ಜೆ ಸಹಾಯಕರ ವೇತನ ಶ್ರೇಣಿಯು ಒಂದೇ ಇದ್ದರೂ ತಾರತಮ್ಯವೆಸಗಿರುವುದು ಗಮನಕ್ಕೆ ಬಂದಿಲ್ಲವೇ; ಹಾಗೂ ಇದನ್ನು ಸರಿಪಡಿಸಲು ಕೈಗೊಂಡಿರುವ ಕ್ರಮಗಳೇನು; | |
| ಉ) | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಕೇಂದ್ರ ಕಛೇರಿ ಬೆಂಗಳೂರಿನಲ್ಲಿ ಪ್ರಥಮ ದರ್ಜೆ ಸಹಾಯಕರ ಹುದ್ದೆಯ ಅವಶ್ಯಕತೆ ಇರುವುದಿಲ್ಲವೇ; ಇಲ್ಲದಿರಲು ಕಾರಣವೇನು? (ವಿವರ ನೀಡುವುದು) | ಅವಶ್ಯಕತೆ ಇರುತ್ತದೆ. |

ಸಂಖ್ಯೆ: ಸಕಇ 387 ಮೊದೇಶಾ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು